ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕೋರ್ಟ್ ವಾರ್ತೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 23/07/2019

# ವಿಶ್ವಾಸಮತ ಬಗ್ಗೆ ಇಂದು ಸುಪ್ರೀಂ ವಿಚಾರಣೆ

## ಶಾಸಕರಾದ ನಾಗೇಶ್, ಶಂಕರ್ ಸಲ್ಲಿಸಿರುವ ಅರ್ಜಿ : ನಿನ್ನೆಯೇ ವಿಚಾರಣೆಗೆ ಕೋರ್ಟ್ ನಕಾರ

• **ಕನ್ನಡಪ್ರಭ ವಾರ್ತೆ** ನವದೆಹಲಿ

ರಾಜ್ಯದ ಮೈತ್ರಿ ಸರ್ಕಾರಕ್ಕೆ ಸೋಮವಾರ ಸಂಜೆ 5 ಗಂಟೆಯೊಳಗೆ ವಿಶ್ವಾಸಮತ ಯಾಚನೆಗೆ ಸೂಚಿಸುವಂತೆ ಪಕ್ಷೇತರ ಶಾಸಕರಾದ ನಾಗೇಶ್, ಕೆಪಿಜೆಪಿಯ ಶಂಕರ್ ಅವರು ಸಲ್ಲಿಸಿರುವ ಅರ್ಜಿ ಸುಪ್ರೀಂ ಕೋರ್ಟ್ ಮುಂದೆ ಮಂಗಳವಾರ ವಿಚಾರಣೆಗೆ ಬರಲಿದೆ.



ತಮ್ಮ ಅರ್ಜಿಯನ್ನು ತುರ್ತು ವಿಚಾರಣೆ ನಡೆಸಬೇಕು ಎಂದು ಪಕ್ಷೇತರರ ಪರ ಹಿರಿಯ ವಕೀಲ ಮುಕುಲ್ ರೋಹಟ್ಗಿ ಅವರು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೊಯ್ ನೇತೃತ್ವದ ತ್ರಿಸದಸ್ಯ ಪೀಠದ ಮುಂದೆ ಸೋಮವಾರ ಮನವಿ ಮಾಡಿದರು. ಕರ್ನಾಟಕ ವಿಧಾನ ಸಭೆಯಲ್ಲಿ ಜು.18ಕ್ಕೆ ನಿಗದಿಯಾಗಿದ್ದ ವಿಶ್ವಾಸಮತ ಯಾಚನೆ ಇನ್ನೂ ನಡೆದಿಲ್ಲ. ಆದ್ದರಿಂದ ಇಂದೇ(ಸೋಮವಾರ) ವಿಶ್ವಾಸ ಮತ ಯಾಚನೆಗೆ ನಿರ್ದೇಶನ ನೀಡಬೇಕು. ಇದಕ್ಕಾಗಿ ನಾವು ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿ ಎಂದು ಕೋರಿದರು.

ಆದರೆ ಈಗ ವಿಚಾರಣೆ ನಡೆಸುವುದು ಅಸಾಧ್ಯ ಎಂದು ನ್ಯಾ| ರಂಜನ್ ಗೊಗೊಯ್ ಹೇಳಿದರು. ಆಗ ರೋಹಟ್ಗಿ, ಕಳೆದ ವರ್ಷ ಕರ್ನಾಟಕದ ಪ್ರಕರಣವೊಂದರಲ್ಲೇ ಸುಪ್ರೀಂ ಕೋರ್ಟ್ 24 ಗಂಟೆಯೊಳಗೆ ವಿಶ್ವಾಸ ಮತ ಯಾಚನೆಗೆ ಸೂಚಿಸಿತ್ತು. ಇಂತಹದ್ದೆ ಆದೇಶವನ್ನು ಈಗಲೂ ನೀಡಿ ಎಂದರು. ಆದರೆ ಸಿಜೆ ಒಪ್ಪಲಿಲ್ಲ. ತಕ್ಷಣವೇ ಮಂಗಳವಾರ ಕಲಾಪದ ಪಟ್ಟಿಯಲ್ಲಿ ಮೊದಲ ಕೇಸ್ ಆಗಿ ಈ ಅರ್ಜಿ ಇನ್ನಷ್ಟೇ ವಿಚಾರಣೆಗೆ ಬರಬೇಕಿದೆ. ರಾಜ್ಯದಲ್ಲಿನ ಮೈತ್ರಿ ಪಕ್ಷಗಳ ಕೆಲವು ಶಾಸಕರು ರಾಜೀನಾಮೆ ಸಲ್ಲಿಸಿ ಸರ್ಕಾರಕ್ಕೆ ನೀಡಿದ್ದ ಬೆಂಬಲ ಹಿಂಪಡೆದು, ಈ ಬಗ್ಗೆ ಮಾಹಿತಿಯನ್ನು ರಾಜ್ಯಪಾಲರಿಗೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಎಚ್.ಡಿ. ಕುಮಾರಸ್ವಾಮಿ ಸದನದಲ್ಲಿ ವಿಶ್ವಾಸಮತ ಯಾಚಿಸಿ ನಿರ್ಣಯ ಮಂಡಿಸಿದ್ದಾರೆ. ಸಭಾಧ್ಯಕ್ಷರು ಜು.18ರಂದು ವಿಶ್ವಾಸಮತ ಸಾಬೀತು ಪಡಿಸುವಂತೆ ತಿಳಿಸಿದ್ದರೂ ಮುಖ್ಯಮಂತ್ರಿಗಳು ಸದನದಲ್ಲಿ ವಿಶ್ವಾಸ ಮತ ಸಾಬೀತುಪಡಿಸಲು ವಿಳಂಬ ಮಾಡುತ್ತಿದ್ದಾರೆ ವಿವರಿಸಲಾಗುತ್ತಿದೆ.

ಅರ್ಜಿಯನ್ನು ಕೈಗೆತ್ತಿಕೊಳ್ಳಿ ಎಂದು ರೋಹಟ್ಗಿ ವಿನಂತಿಸಿಕೊಂಡಾಗ 'ನೋಡೋಣ' ಎಂದು ನ್ಯಾ| ಗೊಗೊಯ್ ಹೇಳಿದರು. ಆ ಬಳಿಕ ಸುಪ್ರೀಂ ಕೋರ್ಟ್‌ನ ಮಂಗಳವಾರದ ಕಲಾಪದ ಪಟ್ಟಿಯಲ್ಲಿ ಪಕ್ಷೇತರ ಶಾಸಕರ ಅರ್ಜಿ ಮೊದಲನೆಯದಾಗಿ ವಿಚಾರಣೆಗೆ ಸೇರ್ಪಡೆಗೊಳಿಸಲಾಗಿದೆ.

## ಕಾಲಮಿತಿಯೊಳಗೆ ವಿಶ್ವಾಸಮತಕ್ಕೆ ಪಿಐಎಲ್

ಬೆಂಗಳೂರು: ಕಾಲಮಿತಿಯೊಳಗೆ ಉದ್ದೇಶಿತ ವಿಶ್ವಾಸಮತ ಯಾಚನೆ ಪ್ರಕ್ರಿಯೆ ಪೂರ್ಣಗೊಳಿಸಲು ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಮತ್ತು ವಿಧಾನಸಭೆ ಅಧ್ಯಕ್ಷ ಕೆ.ಆರ್. ರಮೇಶ್ ಕುಮಾರ್ ಅವರಿಗೆ ನಿರ್ದೇಶಿಸಬೇಕು ಎಂದು ಕೋರಿ ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿದೆ.

ವಕೀಲ ಆರ್.ಆನಂದಮೂರ್ತಿ ಈ ಅರ್ಜಿ ಸಲ್ಲಿಸಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಮತ್ತು ವಿಧಾನಸಭೆ ಸ್ಪೀಕರ್ ಅವರನ್ನು ಪ್ರತಿವಾದಿ ಮಾಡಿದ್ದಾರೆ.